**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಮನಗರ**
**ಘನ ನ್ಯಾಯಾಲಯದಲ್ಲಿ**

**ಪ್ರಕರಣ ಸಂಖ್ಯೆಃ ಎಸ್.ಸಿ 26/2020**

ದಿನಾಂಕಃ 14.09.2021
(ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.)

ಪ್ರಾ.ಸಾಃ 10 (ಚಾ.ಸಾ.14 )

| | | |
|---|---|---|
| ಹೆಸರು | ಃ | ಜೋಸೆಪ್ |
| ತಂದೆಯ ಹೆಸರು | ಃ | ಜಾನ್ |
| ವಯಸ್ಸು | ಃ | 61 ವರ್ಷ |
| ಉದ್ಯೋಗ | ಃ | ನಿವೃತ್ತ ಪಿಎಸ್ಐ |
| ವಾಸ ಸ್ಥಳ | ಃ | ಚನ್ನಪಟ್ಟಣ |

**ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಅಭಿಯೋಜಕರಿಂದಃ**

ನಾನು ತಾಃ 25.11.2019 ರಿಂದ ತಾಃ 31.08.2021 ರವರೆಗೆ ಚನ್ನಪಟ್ಟಣ ಪುರ ಪೊಲೀಸ್ ಠಾಣೆಯ ಪಿಎಸ್ಐ ಆಗಿ ಕಾರ್ಯ ನಿರ್ವಹಿಸಿದ್ದೆನು.

2. ತಾಃ 21.01.2020 ರಂದು ನಾನು ಠಾಣೆಯಲ್ಲಿದ್ದಾಗ ಪಿಎಸ್ಐ ಹರೀಶರವರು ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಒಳರೋಗಿಯಾಗಿ ದಾಖಲಾಗಿರುವ ಫರಾನ್ ಮೆಹದಿ ರವರ ಹೇಳಿಕೆಯನ್ನು ಮಾಡಿಕೊಂಡು ಬನ್ನಿ ಎಂದು ಮೌಖಿಕವಾಗಿ ಹೇಳಿದ್ದರು. ಅದರಂತೆ ನಾನು ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ಭೇಟಿ ನೀಡಿ ಗಾಯಾಳು ಫರಾನ್ ಮೆಹದಿರವರ ಹೇಳಿಕೆಯನ್ನು ವೈದ್ಯರ ಸಮಕ್ಷಮ ದಾಖಲು ಮಾಡಿಕೊಂಡಿರುತ್ತೇನೆ. ಸದರಿ ಹೇಳಿಕೆಯನ್ನು ಹಾಗು ಅದರಲ್ಲಿರುವ ತಮ್ಮ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಸದರಿ ದಾಖಲೆಯನ್ನು ಈಗ ನಿಪಿ.5 ಎಂತಲೂ ಸಾಕ್ಷಿಯ ಸಹಿಯನ್ನು ನಿಪಿ.5(ಎ) ಎಂದು ಗುರುತಿಸಲಾಯಿತು.

**3.** ಸದರಿ ಹೇಳಿಕೆಯನ್ನು ತೆಗೆದುಕೊಂಡು ಬಂದು ಪಿಎಸ್‌ಐರವರ ಮುಂದೆ ಹಾಜರುಪಡಿಸಿರುತ್ತೇನೆ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ.ಕೆವಿಕೆ., ವಕೀಲರಿಂದಃ**

**4.** ಮಧ್ಯಾಹ್ನ **3.30** ಕ್ಕೆ ಪಿಎಸ್‌ಐರವರು ನನಗೆ ಸದರಿ ಹೇಳಿಕೆಯನ್ನು ದಾಖಲು ಮಾಡಿಕೊಂಡು ಬರುವಂತೆ ಹೇಳಿದ್ದರು. ನಾನು ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ಹೋದಾಗ ಸಮಯ ಸಂಹೆ **5.30** ಆಗಿದ್ದು, ಅದೇ ಸಮಯಕ್ಕೆ ನಾನು ಹೇಳಿಕೆ ಮಾಡಿಕೊಂಡಿರುತ್ತೇನೆ. ಗಾಯಾಳುವಿನ ಹೇಳಿಕೆಯನ್ನು ನಾನು **15** ರಿಂದ **20** ನಿಮಿಷಗಳ ಕಾಲ ದಾಖಲು ಮಾಡಿಕೊಂಡಿರುತ್ತೇನೆ. ಗಾಯಾಳುವಿನ ಹೇಳಿಕೆಯನ್ನು ನಾನೇ ಬರೆದುಕೊಂಡಿರುತ್ತೇನೆ.

**5.** ಹೇಳಿಕೆ ಕೊಟ್ಟ ಸಮಯದಲ್ಲಿ ಗಾಯಾಳು ವಿಕ್ಟೋರಿಯ ಆಸ್ಪತ್ರೆಯ ಜನರಲ್ ವಾರ್ಡ್ ನಂ.**6** ರಲ್ಲಿದ್ದರು. ಸದರಿ ಹೇಳಿಕೆ ದಾಖಲಿಸಿಕೊಳ್ಳುವ ಸಮಯದಲ್ಲಿ ಗಾಯಾಳು ಸಂಬಂಧಿಕರು ಆಸ್ಪತ್ರೆಯಲ್ಲಿ ಇದ್ದಿದ್ದನ್ನು ನಾನು ಗಮನಿಸಲಿಲ್ಲ. ನಾನು ಹೇಳಿದಂತೆ ಗಾಯಾಳು ಯಾವುದೇ ಹೇಳಿಕೆ ನೀಡಿಲ್ಲವಾದರೂ ಸಹ ಗಾಯಾಳುವಿನ ಹೇಳಿಕೆಯನ್ನು ಗಾಯಾಳುವಿನ ಮನೆಯವರು ಹೇಳಿದಂತೆ ನಾನೇ ಸೃಷ್ಟಿಸಿರುತ್ತೇನೆ ಅಂದರೆ ಸರಿಯಲ್ಲ. ನಾನು ಗಾಯಾಳುವಿನ ಹೇಳಿಕೆ ಪಡೆದುಕೊಂಡೆ ಎಂದು ಸುಳ್ಳು ನುಡಿಯುತ್ತಿದ್ದೇನೆ ಅಂದರೆ ಸರಿಯಲ್ಲ.

**6.** ನಾನು ಗಾಯಾಳುವಿನ ಹೇಳಿಕೆ ಪಡೆದುಕೊಂಡ ಬಗ್ಗೆ ತನಿಖಾಧಿಕಾರಿಗಳ ಮುಂದೆ ಹೇಳಿಕೆ ನೀಡಿರುವುದಿಲ್ಲ. ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಅಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ.
(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು).

**ಓ.ಹೇ.ಕೇ.ಸರಿ ಇದೆ ಎಂದು ಸಾಕ್ಷಿ ಒಪ್ಪಿದ್ದಾರೆ.**

(ರಮಾ ಬಿ.ಜಿ)
**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,**
**ರಾಮನಗರ.**